**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 06 ನೇ ಜುಲೈ ತಿಂಗಳು 2026ರಂದು

**ಸಿಸಿ ನಂ.56/2026**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ಶಿವಮಲ್ಲಯ್ಯ.ಎನ್., ಬಿನ್ ನಿಲಯ್ಯ, 37 ವರ್ಷ, ಕಾರ್ಮಿಕ, ವಾಸಃ ಮಹಾದೇವಿ ಕಾಲೋನಿ, ದುದ್ದಗೆರೆ ಪೋಸ್ಟ್, ಮೈಸೂರು ಜಿಲ್ಲೆ.

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 18.12.2025ರಂದು ರಾತ್ರಿ 7.40 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದು ರಾಷ್ಟ್ರೀಯ ಹೆದ್ದಾರಿ 275ರ ಹುಣಸೂರು – ಮಡಿಕೇರಿ ಮುಖ್ಯ ರಸ್ತೆಯ ಸೋಮನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಬಳಿ ಆರೋಪಿಯಾದ ನೀವು ನಿಮ್ಮ ಕೆಎ–08/ಜೆಎಕ್ಸ್–7983 ರ ಬಜಾಜ್ ಪಲ್ಸರ್ ಬೈಕಿನಲ್ಲಿ ಚಾಸಾ.1 ಸ್ವಾಮಿ.ಎಂ.ರವರನ್ನು ಬೈಕಿನ ಹಿಂದೆ ಕೂರಿಸಿಕೊಂಡು ಹುಣಸೂರು ಟೌನ್ ಕಡೆಯಿಂದ ಮೈಸೂರು ಕಡೆಗೆ ಬೈಕ್ ನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಸೋಮನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಬಳಿ ಇರುವ ಹಂಪ್ಸ್ ಬಳಿ ಸಡನ್ ಆಗಿ ಬ್ರೇಕ್ ಹಾಕಿದಾ ನೀವು ಮತ್ತು ನಿಮ್ಮ ಬೈಕ್ ನ ಹಿಂದೆ ಕುಳಿತ್ತಿದ್ದ ಚಾಸಾ.1ರವರು ಬೈಕ್ ಸಮೇತ ಕೆಳಕ್ಕೆ ಬಿದ್ದಾಗ ಚಾಸಾ.1ರವರ

ಸೊಂಟಕ್ಕೆ ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

ANITHA Digitally signed by ANITHA Date: 2026.07.06 17:59:55 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.56/2026**

| | | |
|---|---|---|
| ಆಪಾದಿತನ ಹೆಸರು | : | ಶಿವಮಲ್ಲಯ್ಯ.ಎನ್., |
| ತಂದೆಯ ಹೆಸರು | : | ನಿಲಯ್ಯ, |
| ವಯಸ್ಸು | : | 37 ವರ್ಷ, |
| ಉದ್ಯೋಗ | : | ಕಾರ್ಮಿಕ, |
| ವಾಸ | : | ಮಹಾದೇವಿ ಕಾಲೋನಿ, ದುದ್ದಗೆರೆ ಪೋಸ್ಟ್, ಮೈಸೂರು ಜಿಲ್ಲೆ., |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳತ್ತೇನೆ |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 06.07.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**

ANITHA
Digitally signed by ANITHA
Date: 2026.07.06 18:00:01 +0530